# All India Radio: Bangalore
# Regional Bulletin In Kannada
# 08.10.2025 / 6.40 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

**<><><><>**

ಮುಖ್ಯಾಂಶಗಳು

1. ಬನ್ನೇರುಘಟ್ಟ ರಾಷ್ಟ್ರದ ಪ್ರಥಮ ಸೌರ ವಿದ್ಯುತ್ ಜೈವಿಕ ಉದ್ಯಾನ - ಅರಣ್ಯ ಸಚಿವ ಈಶ್ವರ್ ಖಂಡ್ರೆ ಘೋಷಣೆ
2. ದಸರಾ ರಜೆ ವಿಸ್ತರಣೆಯಿಂದ ವಿದ್ಯಾರ್ಥಿಗಳ ಪಠ್ಯ ಚಟುವಟಿಕೆಗಳಿಗೆ ಯಾವುದೇ ಸಮಸ್ಯೆ ಇಲ್ಲ - ಸಚಿವ ಮಧುಬಂಗಾರಪ್ಪ ಸ್ಪಷ್ಟನೆ
3. ರಾಜ್ಯದಲ್ಲಿ ನದಿ ಕಾಲುವೆ ಹಾದು ಹೋಗುವ ಕಡೆ ಸರ್ಕಾರದಿಂದ ೧೦೦ ಕಾಲು ಸಂಕ ನಿರ್ಮಾಣದ ಗುರಿ
4. ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ಛಲವಾದಿ ನಾರಾಯಣಸ್ವಾಮಿ ಭೇಟಿ: ಔಷಧಿ ಕೊರತೆ ಎದುರಾಗದಂತೆ ನೋಡಿಕೊಳ್ಳಲು ಸಲಹೆ
5. ನಾಳೆಯಿಂದ ಭಕ್ತರಿಗೆ ಹಾಸನಾಂಬೆ ದರ್ಶನ - ಹಾಸನ ಜಿಲ್ಲಾಡಳಿತದಿಂದ ಸಕಲ ಸಿದ್ಧತೆ

<><><><>

ಪ್ರಸಕ್ತ ಸನ್ನಿವೇಶದಲ್ಲಿ ಅರಣ್ಯ ಪ್ರದೇಶ ಹೆಚ್ಚಳ ಕಷ್ಟಸಾಧ್ಯವಾಗಿದ್ದು, ಇರುವ ಅರಣ್ಯ ಒತ್ತುವರಿಯಾಗದಂತೆ ಕಾಪಾಡುವುದು ಎಲ್ಲರ ಹೊಣೆಯಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ. ೭೧ನೇ ವನ್ಯಜೀವಿ ಸಪ್ತಾಹದ ಸಮಾರೋಪ ಸಮಾರಂಭ ಹಾಗೂ ಅರಣ್ಯ ಇಲಾಖೆ ಸಿಬ್ಬಂದಿಗೆ ೨೦೨೪ನೇ ಸಾಲಿನ ಮುಖ್ಯಮಂತ್ರಿಗಳ ಪದಕ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಅವರು, ಈ ಕರ್ತವ್ಯವನ್ನು ಅರಣ್ಯ ಸಿಬ್ಬಂದಿ ಪ್ರಾಮಾಣಿಕವಾಗಿ ಮಾಡಬೇಕು ಎಂದು ಕರೆ ನೀಡಿದ್ದಾರೆ. ಹವಾಮಾನ ಬದಲಾವಣೆ, ಜಾಗತಿಕ ತಾಪಮಾನ ಏರಿಕೆಯಿಂದ ಪ್ರಕೃತಿಯ ಮೇಲೆ ದುಷ್ಪರಿಣಾಮ ಆಗುತ್ತಿದ್ದು, ಪ್ರಕೃತಿ ಪರಿಸರ ಉಳಿಸಲು ಎಲ್ಲರೂ ಮುಂದಾಗಬೇಕು ಎಂದು ಹೇಳಿದ್ದಾರೆ. ಹೆಸರಘಟ್ಟ ಕೆರೆ ಬಳಿಯ ೫ ಸಾವಿರದ ೬೭೮ ಎಕರೆ ಪ್ರದೇಶವನ್ನು ಗ್ರೇಟರ್ ಹೆಸರಘಟ್ಟ ಸಂರಕ್ಷಿತ ಹುಲ್ಲುಗಾವಲು ಎಂದು ಘೋಷಿಸಲಾಗಿದೆ. ಬನ್ನೇರುಘಟ್ಟ ಜೈವಿಕ ಉದ್ಯಾನವನದಲ್ಲಿ ೧ ಮೆಗಾವ್ಯಾಟ್ ಕ್ಯಾಪ್ಟಿವ್ ಸೌರ ವಿದ್ಯುತ್ ಸ್ಥಾವರವನ್ನು ಸ್ಥಾಪಿಸಲಾಗುತ್ತಿದ್ದು, ಉದ್ಯಾನದ ಇಂದಿನ ಮತ್ತು ಭವಿಷ್ಯದ ಇಂಧನ ಅಗತ್ಯವನ್ನು ಸೌರ ವಿದ್ಯುತ್ ನಿಂದಲೇ ಪೂರೈಸಲು ತೀರ್ಮಾನಿಸಲಾಗಿದೆ. ದೇಶದಲ್ಲೇ ಪ್ರಥಮ

ಪರಿಸರ ಸ್ನೇಹಿ ವಿದ್ಯುತ್ ಸೌಲಭ್ಯದ ಜೈವಿಕ ಉದ್ಯಾನಕ್ಕೆ ಮುಂದಿನ ವಾರ ಚಾಲನೆ ನೀಡಲಾಗುವುದು ಎಂದು ಹೇಳಿದ್ದಾರೆ. ಸಸ್ಯ ಸಂಕುಲ, ಪ್ರಾಣಿ ಸಂಕುಲ, ಕೀಟ ಸಂಕುಲಗಳಿಂದ ಕೂಡಿದ ಪಶ್ಚಿಮಘಟ್ಟ ರಾಜ್ಯದ ೧೦ ಜಿಲ್ಲೆಗಳಲ್ಲಿ ವ್ಯಾಪಾಕವಾಗಿ ಹಬ್ಬಿದ್ದು, ಜೀವವೈವಿಧ್ಯತೆಯ ಅದ್ಭುತ ತಾಣವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಪದಕ ಸ್ವೀಕರಿಸಿದ ಎಲ್ಲ ೨೫ ಸಿಬ್ಬಂದಿ ಹಾಗೂ ಅವರ ಕುಟುಂಬದ ಸದಸ್ಯರಿಗೆ ಸಚಿವರು ಇದೇ ವೇಳೆ ಅಭಿನಂದನೆ ಸಲ್ಲಿಸಿದರು.

<><><><>

ಶೈಕ್ಷಣಿಕ ಗಣತಿಗೆ ಶಿಕ್ಷಕರ ಬಳಕೆಗಾಗಿ ರಜೆಯನ್ನು ಇದೇ ೧೮ರವರೆಗೆ ವಿಸ್ತರಿಸಿರುವುದರಿಂದ ವಿದ್ಯಾರ್ಥಿಗಳ ಪಠ್ಯ ಚಟುವಟಿಕೆಗಳಿಗೆ ಯಾವುದೇ ತೊಂದರೆ ಆಗುವುದಿಲ್ಲ ಎಂದು ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ ಭರವಸೆ ನೀಡಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರೊಂದಿಗೆ ಮಾತನಾಡಿದ ಅವರು, ಶಾಲಾ ವಾರ್ಷಿಕ ಕ್ಯಾಲೆಂಡರ್‌ನಂತೆ ೨೪೦ ದಿನಗಳಿವೆ. ಆರ್‌ಟಿಇ ಕಾಯ್ದೆ ಪ್ರಕಾರ ೨೨೦ ದಿನಗಳನ್ನು ಕಡ್ಡಾಯವಾಗಿ ಬಳಸಬೇಕಾಗಿದೆ ಎಂದು ಹೇಳಿದ್ದಾರೆ.

<><><><>

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಮಲೆನಾಡು ಪ್ರದೇಶದಲ್ಲಿ ಕಳೆದ ವರ್ಷ ೧೦೦ ಕಾಲುಸಂಕ ನಿರ್ಮಾಣ ಮಾಡಲಾಗಿದೆ. ಆದೇ ರೀತಿ ಪ್ರಸಕ್ತ ಸಾಲಿನಲ್ಲಿ ೨೦೦ ಕಾಲಸಂಕ ನಿರ್ಮಾಣದ ಗುರಿ ಹೊಂದಲಾಗಿದೆ ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ. ಕೋಲಾರದ ಕೆಜಿಎಫ್ ತಾಲೂಕಿನ ನಲ್ಲೂರು ಹಾಗೂ ನತ್ತ ಗ್ರಾಮದ ಸಮೀಪ ಪಾಲರ್ ನದಿಗೆ ಅಡ್ಡಲಾಗಿ ಲೋಕೋಪಯೋಗಿ ಇಲಾಖೆಯಿಂದ ೧೦ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣ ಮಾಡಲಾಗಿರುವ ಸೇತುವೆ ಹಾಗೂ ರಸ್ತೆಯನ್ನು ಉದ್ಘಾಟಿಸಿ ಮಾತನಾಡಿದ ಅವರು ನದಿ, ಕಾಲುವೆ ಹಾದು ಹೋಗಿರುವ ಕಡೆ ಆದ್ಯತೆ ಮೇರೆಗೆ ಸೇತುವೆ ನಿರ್ಮಾಣ ಮಾಡಿಕೊಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

**ಧ್ವನಿ - ಸತೀಶ್ ಜಾರಕಿಹೊಳಿ, ಲೋಕೋಪಯೋಗಿ ಇಲಾಖೆ ಸಚಿವ**

<><><><>

ರಕ್ಷಣಾ ಸಚಿವಾಲಯದ ಕೇಂದ್ರ ಕಚೇರಿಯ ಪರವಾಗಿ ೫೧೫ ಸೇನಾ ನೆಲೆ ಕಾರ್ಯಾಗಾರ ಎಲೆಕ್ಟ್ರಾನಿಕ್ಸ್ ಮತ್ತು ಮೆಕ್ಯಾನಿಕಲ್ ಎಂಜಿನಿಯರ್ ಗಳ ಮಹಾನಿರ್ದೇಶಕರು ಮತ್ತು ಇಂಡಿ ಅಸ್ತ್ರ ಟೆಕ್ನಾಲಜೀಸ್ ಪ್ರೈವೇಟ್ ಲಿಮಿಟೆಡ್ ಭಾರತೀಯ ಸೇನಾ ಭೂ ವ್ಯವಸ್ಥೆಗಳಿಗಾಗಿ ಕೃತಕ ಬುದ್ಧಿಮತ್ತೆ ಆಧರಿಸಿದ ಡ್ರೋನ್ ಸಾಮರ್ಥ್ಯಗಳನ್ನು ವೇಗಗೊಳಿಸುವ ಒಪ್ಪಂದಕ್ಕೆ ಸಹಿ ಹಾಕಿದೆ. ಕೃತಕ ಬುದ್ಧಿಮತ್ತೆ ಆಧರಿಸಿದ ಫ್ಲೈಟ್ ಕಂಟ್ರೋಲ್ ಸಿಸ್ಟಮ್ ಮತ್ತು ಸ್ಟ್ಯಾಂಡರ್ಡ್ ಡ್ರೋನ್ ಆಪರೇಟಿಂಗ್ ಪ್ಲಾಟ್‌ಫಾರ್ಮ್ ಮೇಲೆ ಹೆಚ್ಚಿನ ಗಮನ ಕೇಂದ್ರೀಕರಿಸಿ ಡ್ರೋನ್ ತಯಾರಿಕೆಯಲ್ಲಿ ತಂತ್ರಜ್ಞಾನ ಬಳಸಿಕೊಂಡು ಸಕ್ರಿಯಗೊಳಿಸುವುದು ಒಪ್ಪಂದದ ಉದ್ದೇಶವಾಗಿದೆ.

<><><>

ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಯಾವುದೇ ರೀತಿಯ ಔಷಧಿಗಳ ಕೊರತೆ ಎದುರಾಗದಂತೆ ಸರ್ಕಾರ ಎಚ್ಚರಿಕೆ ವಹಿಸುವುದು ಅಗತ್ಯ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ  ತಿಳಿಸಿದ್ದಾರೆ. ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ಭೇಟಿ ನೀಡಿ ಅಲ್ಲಿನ ಸೌಲಭ್ಯಗಳನ್ನು ಪರಿಶೀಲಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶೇಕಡ ೭೫ರಷ್ಟು ಔಷಧಿಗಳು ಲಭ್ಯವಿದ್ದು, ಉಳಿದ ಔಷಧಿಗಳನ್ನು ಸರ್ಕಾರ ಪೂರೈಕೆ ಮಾಡಬೇಕಾಗಿದೆ ಎಂದು ಹೇಳಿದ್ದಾರೆ. ಬಡವರಿಗೆ ಔಷಧಿ ಅಂಗಡಿಗಳಲ್ಲಿ ಕೊಳ್ಳುವ ಶಕ್ತಿ ಇರುವುದಿಲ್ಲ. ಹೀಗಾಗಿ ಅದನ್ನು ಗಮನಿಸಿ ಸರ್ಕಾರ , ಔಷಧಿ ಪೂರೈಕೆ ಮಾಡಬೇಕು. ಆಸ್ಪತ್ರೆಯಲ್ಲಿ ಸ್ವಚ್ಛತೆ ಕಡೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸರ್ಕಾರಕ್ಕೆ ಸಲಹೆ ನೀಡಿದ್ದಾರೆ.

<><><>

ಇತಿಹಾಸ ಪ್ರಸಿದ್ಧ ಹಾಸನದ ಹಾಸನಾಂಬ ಹಾಗೂ ಸಿದ್ದೇಶ್ವರ ದೇವಾಲಯ ಬಾಗಿಲು ನಾಳೆ ತೆರೆಯಲಿದೆ. ಸಾರ್ವಜನಿಕರಿಗೆ ಇದೇ ಶುಕ್ರವಾರದಿಂದ ದೇವರ ದರ್ಶನಕ್ಕೆ ಜಿಲ್ಲಾಡಳಿತ ಅವಕಾಶ ಕಲ್ಪಿಸಿದೆ. ವರ್ಷಕ್ಕೆ ಒಮ್ಮೆ ಮಾತ್ರ ಬಾಗಿಲು ತೆಗೆದು ದರ್ಶನ ನೀಡುವ ಹಾಸನಾಂಬೆ ಕಣ್ತುಂಬಿಕೊಳ್ಳಲು ಭಕ್ತರು ಕಾತರರಾಗಿದ್ದಾರೆ. ಈ ಬಾರಿ ಇದೇ ೨೨ರ ತನಕ ದರ್ಶನಕ್ಕೆ ಅವಕಾಶ ಇರುವುದರಿಂದ ೨೨ ಲಕ್ಷಕ್ಕೂ ಅಧಿಕ ಭಕ್ತರು ಆಗಮಿಸುವ ಅಂದಾಜು ಮಾಡಲಾಗಿದೆ. ಭಕ್ತರಿಗೆ ಉಚಿತ ಪ್ರಸಾದ ವ್ಯವಸ್ಥೆ ಮಾಡಲು ಜಿಲ್ಲಾಡಳಿತ ನಿರ್ಧರಿಸಿದೆ. ೮೦ ವರ್ಷಕ್ಕಿಂತ ಮೇಲ್ಪಟ್ಟವರಿಗೆ ಹಾಗೂ ವಿಶೇಷಚೇತರನರಿಗೆ ನೇರ ದರ್ಶನ ವ್ಯವಸ್ಥೆ ಕಲ್ಪಿಸಲಾಗಿದೆ. ಇದೇ ಮೊದಲ ಬಾರಿಗೆ ವಿವಿಐಪಿ ಪಾಸ್ ರದ್ದು ಮಾಡಲಾಗಿದೆ. ಪ್ರತಿ ಗಂಟೆಗೆ ೬ ಸಾವಿರ ಭಕ್ತರಂತೆ ಪ್ರತಿ ದಿನ ೬೦ ರಿಂದ ಒಂದು ಲಕ್ಷಕ್ಕೂ ಹೆಚ್ಚು ಭಕ್ತರು ದೇವಿಯ ದರ್ಶನ ಪಡೆಯಲು ಅನುಕೂಲವಾಗುವಂತೆ ವ್ಯವಸ್ಥೆ ಮಾಡಲಾಗಿದೆ. ಬೆಂಗಳೂರಿನಿಂದ ಹಾಸನಕ್ಕೆ ಕೆಎಸ್‌ಆರ್‌ಟಿಸಿಯಿಂದ ವಿಶೇಷ ಬಸ್ ವ್ಯವಸ್ಥೆ ಕಲ್ಪಿಸಲಾಗಿದೆ.

<><><>

ಕಾರ್ಮಿಕ ವರ್ಗದ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರ ಹಲವಾರು ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೊಳಿಸಿದ್ದು, ಕಾರ್ಮಿಕರು ಯೋಜನೆಗಳ ಸದುಪಯೋಗ ಪಡೆಯಬೇಕೆಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ಕರೆ ನೀಡಿದ್ದಾರೆ. ತುಮಕೂರಿನ ಹನುಮಂತಪುರದಲ್ಲಿ ನೂತನವಾಗಿ ನಿರ್ಮಿಸಿರುವ ಕಾರ್ಮಿಕ ಭವನ ಉದ್ಘಾಟಿಸಿ ಮಾತನಾಡಿದ ಅವರು, ಕಾರ್ಮಿಕ  ಭವನವು ಮುಂದಿನ ದಿನಗಳಲ್ಲಿ ಕಾರ್ಮಿಕರ ಸಭೆ, ತರಬೇತಿ ಶಿಬಿರಗಳಿಗೆ ಉತ್ತಮ ವೇದಿಕೆಯಾಗಿ ಉಪಯೋಗವಾಗಲಿದೆ ಎಂದು ತಿಳಿಸಿದ್ದಾರೆ.

<><><>

ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗೆ ಹೊಸದಾಗಿ ೬೦೦ ಬಸ್ ಗಳು ಸೇರ್ಪಡೆಗೊಳ್ಳಲಿವೆ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ. ದಾವಣಗೆರೆ ಜಿಲ್ಲೆ ಚನ್ನಗಿರಿಯಲ್ಲಿಂದು ನೂತನ ಘಟಕ ಉದ್ಘಾಟಿಸಿ ಮಾತನಾಡಿದ ಅವರು, ಹಬ್ಬದ ಸಂದರ್ಭಗಳಲ್ಲಿ ಹೆಚ್ಚುವರಿ ಬಸ್ ಗಳನ್ನು ಓಡಿಸಲಾಗುತ್ತದೆ. ಇಂಥಹ ಸಂದರ್ಭಗಳಲ್ಲಿ ಸಂಸ್ಥೆಯ ಲಾಭಕ್ಕಿಂತ ಜನರಿಗೆ ಅನುಕೂಲವಾಗುವುದು ಮುಖ್ಯ ಎಂದು ಹೇಳಿದ್ದಾರೆ. ದಸರಾ ಸಂದರ್ಭದಲ್ಲಿ ಹೆಚ್ಚುವರಿಯಾಗಿ ೨ ಸಾವಿರದ ೩೦೦ ಬಸ್ ಗಳ ಸೇವೆ ನೀಡಲಾಗಿತ್ತು. ಇದೀಗ ಮತ್ತೆ ೬೦೦ ಹೊಸ ಬಸ್ ಗಳನ್ನು ಸೇರ್ಪಡೆ ಮಾಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ವಾಯುವ್ಯ ಕರ್ನಾಟಕ ಸಾರಿಗೆ ಸಂಸ್ಥೆಗೆ ೨೦೦ ವಿದ್ಯುತ್‌ಚಾಲಿತ ಬಸ್ ನೀಡಲು ಕೇಂದ್ರ ಸರ್ಕಾರ ಒಪ್ಪಿಗೆ ನೀಡಿದೆ. ಪಿಎಂ ಇ-ಬಸ್ ಸೇವಾ ಯೋಜನೆಯಲ್ಲಿ ವಾಯುವ್ಯ ಸಾರಿಗೆ ಹುಬ್ಬಳ್ಳಿ-ಬೆಳಗಾವಿ ನಗರಗಳು ಆಯ್ಕೆಯಾಗಿದ್ದು, ಮುಂದಿನ ದಿನಗಳಲ್ಲಿ ಅವಳಿ ನಗರದಲ್ಲಿ ಇವಿ ಬಸ್ ಗಳು ಸಂಚರಿಸಲಿವೆ ಎಂದು ವಾಯುವ್ಯ ಸಾರಿಗೆ ಸಂಸ್ಥೆ ವ್ಯವಸ್ಥಾಪಕ ನಿರ್ದೇಶಕಿ ಪ್ರಿಯಾಂಗ ಎಂ. ತಿಳಿಸಿದ್ದಾರೆ. ಹುಬ್ಬಳ್ಳಿ-ಧಾರವಾಡ ಅವಳಿ ನಗರಕ್ಕೆ ೧೦೦ ಹಾಗೂ ಬೆಳಗಾವಿಗೆ ೧೦೦ ಇವಿ ಬಸ್ ಗಳು ಮಂಜೂರಾಗಿವೆ. ಈಗಾಗಲೇ ಡಿಪೋ ನಿರ್ಮಾಣಕ್ಕೆ ಡಿಪಿಆರ್ ಸಲ್ಲಿಸಲಾಗಿದ್ದು, ಕೇಂದ್ರದಿಂದ ಅನುಮೋದನೆ ಸಿಕ್ಕರೆ ಹುಬ್ಬಳ್ಳಿ ಮತ್ತು ಬೆಳಗಾವಿಯಲ್ಲಿ ತಲಾ ಐದು ಎಕರೆ ಸ್ಥಳಗಳಲ್ಲಿ ಡಿಪೋ ನಿರ್ಮಾಣವಾಗಲಿದೆ ಎಂದು ಹೇಳಿದ್ದಾರೆ.

**ಧ್ವನಿ- ಪ್ರಿಯಾಂಗ ಎಂ, ವಾಯುವ್ಯ ಸಾರಿಗೆ ಸಂಸ್ಥೆ ವ್ಯವಸ್ಥಾಪಕ ನಿರ್ದೇಶಕಿ**

<><><><>

ಯಾದಗಿರಿ ಜಿಲ್ಲೆಯ ಹುಣಸಗಿ ತಾಲ್ಲೂಕಿನ ನಾರಾಯಣಪುರ ಗ್ರಾಮದ ಬಸವಸಾಗರ ಜಲಾಶಯಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಬಾಗಿನ ಅರ್ಪಿಸಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>